Received on 17/6/2020
WVP

# ಕರ್ನಾಟಕ ಸರ್ಕಾರ

## <u>ಕಾಲೇಜು ಶಿಕ್ಷಣ ಆಯುಕ್ತರ ಕಛೇರಿಯ ನಡವಳಿಗಳು</u>

ವಿಷಯ: ಕಾಲೇಜು ಶಿಕ್ಷಣ ಇಲಾಖೆಯ **ಗೆಜೆಟೆಡ್ ಮ್ಯಾನೇಜರ್‌ಗಳಿಗೆ ಸಹಾಯಕ ನಿರ್ದೇಶಕರ** ಹುದ್ದೆಗೆ ಮುಂಬಡ್ತಿ ನೀಡುವ ಬಗ್ಗೆ.

ಉಲ್ಲೇಖ:
1. ಸರ್ಕಾರದ ದಿನಾಂಕ : 27.02.2019 ಹಾಗೂ ದಿನಾಂಕ : 15.05.2019ರ ಸಂಖ್ಯೆ : ಸಿಆಸುಇ/186/ಎಸ್‌ಆರ್‌ಎಸ್/2018ರ ಆದೇಶಗಳು.
2. ಈ ಕಛೇರಿ ದಿನಾಂಕ : 25.07.2019ರ ಸಂಖ್ಯೆ : ಕಾಶಿಇ/26/ ಮ್ಯಾಜೆಪ/ಬಸ್ಥಾವಿ/2019-20 ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ರಾಜ್ಯವ್ಯಾಪಿ ಉಳಿಕೆ ಮೂಲ ವೃಂದದ **ಗೆಜೆಟೆಡ್ ಮ್ಯಾನೇಜರ್**‌ಗಳ ಅಂತಿಮ ಜ್ಯೇಷ್ಠತಾ ಪಟ್ಟಿ.
3. ಈ ಕಛೇರಿ ದಿನಾಂಕ : 25.07.2019ರ ಸಂಖ್ಯೆ : ಕಾಶಿಇ/38/ ಬೋನೌ/ಹೈ.ಕ/ಜೇಪ/ಬಸ್ಥಾವಿ/2019-20 ರ ಅಧಿಕೃತ ಜ್ಞಾಪನದೊಂದಿಗೆ ಪ್ರಕಟಿಸಿರುವ ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ **ಗೆಜೆಟೆಡ್ ಮ್ಯಾನೇಜರ್**‌ಗಳ ಅಂತಿಮ ಜ್ಯೇಷ್ಠತಾ ಪಟ್ಟಿ.
4. ದಿನಾಂಕ: 09.06.2020 ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯ ನಡವಳಿಗಳು.
5. ದಿನಾಂಕ :12.06.2020 ರ ಸಮಸಂಖ್ಯೆಯ ಜ್ಞಾಪನ.

*****

<u>ಪ್ರಸ್ತಾವನೆ:</u>

ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ **ಸಹಾಯಕ ನಿರ್ದೇಶಕರ** ಹುದ್ದೆಗಳನ್ನು **ಗೆಜೆಟೆಡ್ ಮ್ಯಾನೇಜರ್** ಹುದ್ದೆಯಿಂದ ಶೇಕಡ 100ರಷ್ಟು ಹುದ್ದೆಗಳನ್ನು ಬಡ್ತಿ ಮೂಲಕ ತುಂಬಲು ಅವಕಾಶ ಕಲ್ಪಿಸಲಾಗಿರುತ್ತದೆ. ಉಲ್ಲೇಖ (2) ಮತ್ತು (3)ರ ಅಧಿಕೃತ ಜ್ಞಾಪನಗಳೊಂದಿಗೆ ಪ್ರಕಟಿಸಿರುವ ಈ ಇಲಾಖೆಯ ರಾಜ್ಯಾವಾರು ಹಾಗೂ ಕಲ್ಯಾಣ-ಕರ್ನಾಟಕ ಪ್ರದೇಶದ ವ್ಯಾಪ್ತಿಯ **ಗೆಜೆಟೆಡ್ ಮ್ಯಾನೇಜರ್‌ಗಳ** ಅಂತಿಮ ಜ್ಯೇಷ್ಠತಾ ಪಟ್ಟಿಯ ಆಧಾರದ ಮೇಲೆ **ಸಹಾಯಕ ನಿರ್ದೇಶಕ** ವೃಂದದ ಖಾಲಿ ಹುದ್ದೆಗಳನ್ನು ಮುಂಬಡ್ತಿ ಮೂಲಕ ತುಂಬಬೇಕಾಗಿರುತ್ತದೆ. ಉಲ್ಲೇಖ (4)ರಲ್ಲಿ ದಿನಾಂಕ:09.06.2020ರಂದು ನಡೆದ ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ಖಾಲಿ ಇರುವ **ಸಹಾಯಕ ನಿರ್ದೇಶಕರ** ಹುದ್ದೆಗಳನ್ನು ಅರ್ಹ **ಗೆಜೆಟೆಡ್ ಮ್ಯಾನೇಜರ್‌ಗಳಿಂದ** ಮುಂಬಡ್ತಿ ಮೂಲಕ ಭರ್ತಿ ಮಾಡಲು ಸಮಿತಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಇಲಾಖಾ ಮುಂಬಡ್ತಿ ಸಮಿತಿ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ **ಗೆಜೆಟೆಡ್ ಮ್ಯಾನೇಜರ್** ವೃಂದದಿಂದ **ಸಹಾಯಕ ನಿರ್ದೇಶಕರ** ವೃಂದಕ್ಕೆ ಬಡ್ತಿ ಪಡೆದಿರುವವರಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿಗೊಳಿಸಲು ಉಲ್ಲೇಖ (5)ರ ಜ್ಞಾಪನದಂತೆ ದಿನಾಂಕ: 16.06.2020 ರಂದು ಕೌನ್ಸಿಲಿಂಗ್‌ಗೆ ಹಾಜರಾಗಲು ಸೂಚಿಸಲಾಗಿತ್ತು. ಅದರಂತೆ, ದಿನಾಂಕ: 16.06.2020 ರಂದು ಸ್ಥಳನಿಯುಕ್ತಿಗಾಗಿ ನಡೆಸಿದ ಕೌನ್ಸಿಲಿಂಗ್‌ನಲ್ಲಿ ಸ್ಥಳ ಆಯ್ಕೆ ಮಾಡಿಕೊಂಡಿರುವ ಗೆಜೆಟಡ್ ಮ್ಯಾನೇಜರ್‌ಗಳಿಗೆ **ಸಹಾಯಕ ನಿರ್ದೇಶಕರಾಗಿ** ಸ್ಥಾನಪನ್ನ ಬಡ್ತಿ ನೀಡಿ ಸ್ಥಳನಿಯುಕ್ತಿ ಆದೇಶ ಹೊರಡಿಸಬೇಕಾಗಿರುವುದರಿಂದ, ಈ ಕೆಳಕಂಡ ಆದೇಶ.

**<u>ಆದೇಶ ಸಂಖ್ಯೆ: ಕಾಶಿಇ/46/ಸ.ನಿ/ಬಡ್ತಿ/ಬಸ್ಥಾವಿ/2019-20, ಬೆಂಗಳೂರು ದಿನಾಂಕ: 16.06.2020</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ ಈ ಕೆಳಕಂಡ ಗೆಜೆಟೆಡ್ ಮ್ಯಾನೇಜರ್‌ಗಳಿಗೆ ವೇತನ ಶ್ರೇಣಿ **ರೂ. 43100-1100-46400-1250-53900-1450-62600-1650-72500-1900-83900 ರಲ್ಲಿ** ತಾತ್ಕಾಲಿಕವಾಗಿ ಹಾಗೂ ಮುಂದಿನ ಆದೇಶದವರೆಗೆ **ಸಹಾಯಕ ನಿರ್ದೇಶಕರ** ವೃಂದಕ್ಕೆ ಸ್ಥಾನಪನ್ನ ಬಡ್ತಿ ನೀಡಿ ಅವರುಗಳ ಹೆಸರಿನ ಮುಂದೆ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಂಡಿರುವ ಖಾಲಿ ಹುದ್ದೆಗೆ ಎದುರಾಗಿ, ಈ ಕೂಡಲೇ ಜಾರಿಗೆ ಬರುವಂತೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.

## ರಾಜ್ಯವ್ಯಾಪಿ ಉಳಿಕೆ ಮೂಲ ವೃಂದ (ಆರ್.ಕೆ.)

| ಕ್ರ. ಸಂ | ಹೆಸರು ಶ್ರೀ/ಶ್ರೀಮತಿ | ಕಾರ್ಯ ನಿರ್ವಹಿಸುತ್ತಿರುವ ಕಛೇರಿ/ಕಾಲೇಜು | ಬಡ್ತಿ ನೀಡಿ ಸ್ಥಳ ನಿಯುಕ್ತಿಗೊಳಿಸಿದ ಕಛೇರಿ/ಕಾಲೇಜು | ಷರಾ |
|---|---|---|---|---|
| 1 | ಜಯಣ್ಣ.ಎಲ್.ಎಂ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತುರುವೇಕೆರೆ | ಪ್ರಾದೇಶಿಕ ಕಛೇರಿ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 2 | ಮಂಜುನಾಥ.ಹೆಚ್.ಎಂ. | ಸರ್ಕಾರಿ ಕಲಾ ಕಾಲೇಜು, ಚಿತ್ರದುರ್ಗ | ಪ್ರಾದೇಶಿಕ ಕಛೇರಿ, ಮೈಸೂರು. | ಖಾಲಿ ಹುದ್ದೆಗೆ ಎದುರಾಗಿ |
| 3 | ನಟರಾಜ.ಕೆ.ವಿ. | ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜು, ಚಿಂತಾಮಣಿ. | ಪ್ರಾದೇಶಿಕ ಕಛೇರಿ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 4 | ನೀಲಕಂಠಪ್ಪ.ಸಿ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಅಜ್ಜಂಪುರ, ಚಿಕ್ಕಮಗಳೂರು ಜಿಲ್ಲೆ. | ಕೇಂದ್ರ ಕಛೇರಿ, ಬೆಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| 5 | ನಾಗೇಂದ್ರ ಪ್ರಸಾದ್.ಎ.ಬಿ. | ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ತೆರಕಣಾಂಬಿ | ಪ್ರಾದೇಶಿಕ ಕಛೇರಿ, ಮಂಗಳೂರು. | ಖಾಲಿ ಹುದ್ದೆಗೆ ಎದುರಾಗಿ |
| | ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದ (ಕೆ.ಕೆ.) | | | |
| 1 | ದಾದಾಪುರ್.ಎಸ್.ಬಿ. | ಪ್ರಾದೇಶಿಕ ಕಛೇರಿ, ಕಲಬುರಗಿ. | ಪ್ರಾದೇಶಿಕ ಕಛೇರಿ, ಕಲಬುರಗಿ. | ಖಾಲಿ ಹುದ್ದೆಗೆ ಎದುರಾಗಿ |

ಬಡ್ತಿ ಹೊಂದಿರುವ ಸಹಾಯಕ ನಿರ್ದೇಶಕರುಗಳು ಆದೇಶದ ಪ್ರತಿಯನ್ನು ಇಲಾಖಾ ವೆಬ್‌ಸೈಟ್‌ನಿಂದ ಪಡೆದು ಸ್ಥಳನಿಯುಕ್ತಿಗೊಳಿಸಲಾದ ಕಛೇರಿಯಲ್ಲಿ ಈ ಆದೇಶ ಹೊರಡಿಸಿದ 15 ದಿನಗಳೊಳಗಾಗಿ ಕರ್ತವ್ಯಕ್ಕೆ ಹಾಜರಾಗಿ ವರದಿ ಮಾಡಿಕೊಳ್ಳತಕ್ಕದ್ದು, ತಪ್ಪಿದಲ್ಲಿ ಬಡ್ತಿಯನ್ನು ರದ್ದುಪಡಿಸಲಾಗುವುದು. ಬಡ್ತಿ ಹೊಂದಿದ ಅಧಿಕಾರಿಗಳು ನಿಯಮಾನುಸಾರ ಸೇರುವಿಕೆ ಕಾಲ ಪಡೆಯಲು ಅರ್ಹರಿರುತ್ತಾರೆ.

ಪ್ರಸ್ತುತ ನಿಯೋಜನೆ ಮೇರೆಗೆ ಕರ್ತವ್ಯ ನಿರ್ವಹಿಸುತ್ತಿರುವ ಗೆಜೆಟೆಡ್ ಮ್ಯಾನೇಜರ್‌ಗಳ ನಿಯೋಜನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ರದ್ದುಪಡಿಸಲಾಗಿದೆ.

ಕಾಲೇಜು ಶಿಕ್ಷಣ ಆಯುಕ್ತರು

ಇವರಿಗೆ:
1) ಮಹಾಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು –ಮಾಹಿತಿಗಾಗಿ.
2) ಎಲ್ಲಾ ಪ್ರಾದೇಶಿಕ ಕಛೇರಿಯ ಜಂಟಿ ನಿರ್ದೇಶಕರುಗಳಿಗೆ–ಮಾಹಿತಿ ಹಾಗೂ ಮುಂದಿನ ಅಗತ್ಯಕ್ರಮಕ್ಕಾಗಿ.
3) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ–ಮಾಹಿತಿ ಹಾಗೂ ಮುಂದಿನ ಅಗತ್ಯ ಕ್ರಮಕ್ಕಾಗಿ.
4) ಮೇಲ್ಕಂಡ ಎಲ್ಲಾ ಗೆಜೆಟೆಡ್ ಮ್ಯಾನೇಜರ್‌ಗಳಿಗೆ – ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.
5) ಮಾಹಿತಿ ಅಧಿಕಾರಿಗಳು, ಮಾಹಿತಿ ವಿಭಾಗ, ಕೇಂದ್ರ ಕಛೇರಿ, ಬೆಂಗಳೂರು – ಸದರಿ ಆದೇಶವನ್ನು ಇಲಾಖಾ ವೆಬ್–ಸೈಟ್‌ನಲ್ಲಿ ಪ್ರಕಟಿಸುವ ಸಂಬಂಧ ಅಗತ್ಯ ಕ್ರಮಕ್ಕಾಗಿ.

ಪ್ರತಿಯನ್ನು :
1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಉನ್ನತ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು – ಮಾಹಿತಿಗಾಗಿ.
2. ಕಛೇರಿ ಪ್ರತಿ.